# AUTOMOTIVE AXLES LIMITED

**22nd May 2025**

**The BSE Limited**
Phiroze Jeejeebhoy Towers
Dalal Street
Mumbai – 400 001
**Scrip Code: 505010**

**National Stock Exchange of India Limited**
Exchange Plaza, Plot No. C/1, G- Block
Bandra (E)
Mumbai – 400 051
**Scrip Symbol: AUTOAXLES**

**Attn: Listing Department**

Dear Sir/Madam,

**Sub: Newspaper Advertisement – Disclosure under Regulation 30 of SEBI (Listing Obligations and Disclosure Requirements) Regulations, 2015.**

Pursuant to Regulation 30 read with Schedule III, Part A, Para A of SEBI (Listing Obligations and Disclosure Requirements) Regulations, 2015, we enclose the copies of Newspaper Advertisement published in "The Financial Express" (English) and "The Andolana" (Kannada) on 22nd February 2025 regarding Audited Financial Results for the Quarter and Year ended 31st March 2025.

This is for your information and records.

Thanking you

Yours faithfully

**For Automotive Axles Limited**

DEBADAS PANDA

Digitally signed by DEBADAS PANDA
Date: 2025.05.22 11:37:42 +05'30'

**Debadas Panda**
**Company Secretary & Compliance Officer**

**Encl: as above**

# ಸಿದ್ಧಾರ್ಥ ಶಿಕ್ಷಣ ಸಂಸ್ಥೆಗಳ ಮೇಲೆ ಇಡಿ ದಾಳಿ

ಬೆಂಗಳೂರು: ಕನ್ನಡ ಚಲನಚಿತ್ರ ನಟಿ ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣಕ್ಕೆ ಸಂಬಂಧಿಸಿದ ಹಣ ವರ್ಗಾವಣೆ ಆರೋಪದ ಮೇರೆಗೆ ಗೃಹ ಸಚಿವ ಡಾ.ಜಿ.ಪರಮೇಶ್ವರ್ ಒಡೆತನದ ತುಮಕೂರಿನ ವೈದ್ಯಕೀಯ ಕಾಲೇಜು ಮತ್ತು ಶಿಕ್ಷಣ ಸಂಸ್ಥೆಯ ಮೇಲೆ ಜಾರಿ ನಿರ್ದೇಶನಾಲಯ ದಾಳಿ ನಡೆಸಿದೆ.

- ಗೃಹ ಸಚಿವ ಡಾ.ಜಿ.ಪರಮೇಶ್ವರ್ ಒಡೆತನದ ಶಿಕ್ಷಣ ಸಂಸ್ಥೆಗಳು
- ರನ್ಯಾ ರಾವ್ ಚಿನ್ನ ಕಳ್ಳಸಾಗಣೆ ಪ್ರಕರಣ: ಹಣ ವರ್ಗಾವಣೆ ಆರೋಪ

5 ಕಾರುಗಳಲ್ಲಿ ಬಂದ ಇಡಿ ತಂಡ ತುಮಕೂರಿನ ಹೆಗ್ಗೆರೆಯಲ್ಲಿರುವ ಸಿದ್ಧಾರ್ಥ ವೈದ್ಯಕೀಯ ಶಿಕ್ಷಣ ಸಂಸ್ಥೆ, ಮರಳೂರು ದಿಣ್ಣೆಯಲ್ಲಿರುವ ಶ್ರೀ ಸಿದ್ಧಾರ್ಥ ಇಂಜಿನಿಯ ರಿಂಗ್ ಕಾಲೇಜು ಹಾಗೂ ಹೆಗ್ಗೆರೆಯಲ್ಲಿರುವ ಪರಮೇಶ್ವರ್ ಅವರ ಮನೆ, ತುಮಕೂರಿನ ಹೊರವಲಯದಲ್ಲಿರುವ ಹಳೆಯ ಎಚ್‌ಎಂಎಸ್ ಕಾಲೇಜು, ನೆಲಮಂಗಲದ ಬಳಿಯಿರುವ ಸಿದ್ಧಾರ್ಥ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಮೇಲೆ ಏಕಕಾಲಕ್ಕೆ ದಾಳಿ ನಡೆಸಿದೆ.

ರನ್ಯಾ ರಾವ್ ಮತ್ತು ಪರಮೇಶ್ವರ್ ಅವರಿಗೆ ಸಂಬಂಧಿಸಿದ ವೈದ್ಯಕೀಯ ಕಾಲೇಜಿನ ನಡುವೆ ಹಣದ ವಹಿವಾಟು ನಡೆದಿದೆ ಎಂಬ ಆರೋಪ ಕೇಳಿ ಬಂದ ನಂತರ ಈ ಬೆಳವಣಿಗೆ ನಡೆದಿದೆ.

ಪರಮೇಶ್ವರ್ ಅವರ ಮನೆ ಹಾಗೂ ಶಿಕ್ಷಣ ಸಂಸ್ಥೆಗಳ ಮೇಲೆ ಆರು ವರ್ಷಗಳ ಹಿಂದೆ ಆದಾಯ ತೆರಿಗೆ ದಾಳಿಯಾಗಿತ್ತು. ಇತ್ತೀಚೆಗೆ ಪರಮೇಶ್ವರ್ ಅವರು ತುಮಕೂರಿನ ಹೊರವಲಯದಲ್ಲಿರುವ ಎಚ್‌ಎಂಎಸ್ ಇಂಜಿನಿಯರಿಂಗ್ ಕಾಲೇಜನ್ನು ಕಾಂಗ್ರೆಸ್ ಮಾಜಿ ಶಾಸಕ ಶಫಿ ಅಹಮದ್ ಅವರಿಂದ ಖರೀದಿಸಿದ್ದರು. ಈ ವೇಳೆ ಭಾರೀ ಪ್ರಮಾಣದ ಹಣಕಾಸಿನ ವಹಿವಾಟು ನಡೆದಿತ್ತು ಎಂದು ತಿಳಿದುಬಂದಿದೆ.

**2019ರ ಐಟಿ ದಾಳಿ ಸಂದರ್ಭದಲ್ಲಿ ಪರಮೇಶ್ವರ್ ಆಪ್ತ ಸಹಾಯಕ ರಮೇಶ್ ಅವರನ್ನು ವಿಚಾರಣೆಗೆ ಒಳಪಡಿಸಲಾಗಿತ್ತು. ಈ ಬೆಳವಣಿಗೆಯ ನಂತರ ಅವರು**



**ಬೆಂಗಳೂರಿನ ಜ್ಞಾನ ಭಾರತಿ ವಿವಿ ಕ್ಯಾಂಪಸ್ ವ್ಯಾಪ್ತಿಯಲ್ಲಿ ಮರಕ್ಕೆ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದರು. ಈ ವಿಚಾರ ಕರ್ನಾಟಕ ರಾಜಕೀಯದಲ್ಲಿಯೂ ತೀವ್ರ ಕೋಲಾಹಲಕ್ಕೆ ಕಾರಣವಾಗಿತ್ತು. ರಮೇಶ್ ಆತ್ಮಹತ್ಯೆಗೆ ಐಟಿ ಅಧಿಕಾರಿಗಳ ಕಿರುಕುಳ ಕಾರಣ ಎಂಬ ದೂರುಗಳು ಕೇಳಿಬಂದಿವೆ ಎಂದು ಅಂದಿನ ವಿರೋಧ ಪಕ್ಷದ ನಾಯಕ, ಈಗಿನ ಸಿಎಂ ಸಿದ್ದರಾಮಯ್ಯ ಗಂಭೀರ ಆರೋಪ ಮಾಡಿದ್ದರು.**

ಜೊತೆಗೆ ಮೈಸೂರಿನಲ್ಲಿ ಅಂತಾರಾಷ್ಟ್ರೀಯ ವಸತಿ ಶಾಲೆಯೊಂದನ್ನು ಪರಮೇಶ್ವರ್ ಆರಂಭಿಸಿದ್ದರು. ಜೊತೆಗೆ ಕೆಲವರು ಆಸ್ತಿಗಳ ವಹಿವಾಟುಗಳು ನಡೆದಿರುವ ಮಾಹಿತಿಗಳಿವೆ. ಈ ಹಿನ್ನೆಲೆಯಲ್ಲಿ ಶಿಕ್ಷಣ ಸಂಸ್ಥೆಗಳ ಮೇಲೆ ದಾಳಿ ನಡೆದಿದೆ ಎಂದು ತಿಳಿದುಬಂದಿದೆ.

ಸಿದ್ಧಾರ್ಥ ವೈದ್ಯಕೀಯ ಶಿಕ್ಷಣ ಸಂಸ್ಥೆ ಹಾಗೂ ಇಂಜಿನಿಯರಿಂಗ್ ಕಾಲೇಜಿನಲ್ಲಿ ದೇಶದ ವಿವಿಧ ರಾಜ್ಯಗಳಿಂದಷ್ಟೇ ಅಲ್ಲದೆ ವಿದೇಶಗಳ ವಿದ್ಯಾರ್ಥಿಗಳು ಕೂಡ ಪ್ರವೇಶ ಪಡೆಯುವುದು ಸಾಮಾನ್ಯ. ಈ ಸಂದರ್ಭದಲ್ಲಿ ಬೇರೆ ಬೇರೆ ಸ್ವರೂಪಗಳಲ್ಲಿ ಹಣಕಾಸಿನ ವಹಿವಾಟುಗಳು ನಡೆಯುತ್ತವೆ. ಅದರಲ್ಲಿ ಕೆಲವು ಪಿಎಂಎಲ್‌ಎ ಕಾಯ್ದೆ ವ್ಯಾಪ್ತಿಗೊಳಪಡಲಿವೆ ಎಂದು ಹೇಳಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಜಾರಿ ನಿರ್ದೇಶನಾಲಯ ಶೋಧ ಕಾರ್ಯಾಚರಣೆ ನಡೆಸಿದೆ ಎಂದು ತಿಳಿದುಬಂದಿದೆ.

ದಾಳಿಯ ಮಾಹಿತಿ ದೊರೆಯುತ್ತಿದ್ದಂತೆ ಬೆಂಗಳೂರಿನಲ್ಲಿದ್ದ ಡಾ.ಜಿ.ಪರಮೇಶ್ವರ್ ಅವರು ಪತ್ನಿ ಕನಿಕಾ ಅವರೊಂದಿಗೆ ಖಾಸಗಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲು ಪ್ರಯಾಣಿಸಿದ್ದಾರೆ. ಪ್ರತಿದಿನ ಮನೆಯಿಂದ ಹೊರಡುವಾಗ ಮಾಧ್ಯಮಗಳಿಗೆ ಹೇಳಿಕೆ ನೀಡಿ ಹೊರಡುವುದು ರೂಢಿ. ಆದರೆ ಇಂದು ಮಾಧ್ಯಮಗಳ ಯಾವುದೇ ಪ್ರಶ್ನೆಗಳಿಗೆ ಪ್ರತಿಕ್ರಿಯಿಸದೆ ಪರಮೇಶ್ವರ್ ತೆರಳಿದರು.

**ಕಾಂಗ್ರೆಸ್ ಖಂಡನೆ:** ಗೃಹ ಸಚಿವ ಜಿ.ಪರಮೇಶ್ವರ್ ಅವರಿಗೆ ಸಂಬಂಧಿಸಿದ ಸಂಸ್ಥೆಗಳ ಮೇಲೆ ನಡೆಸಲಾದ ದಾಳಿಗಳನ್ನು ಕಾಂಗ್ರೆಸ್ ಪಕ್ಷ ತೀವ್ರವಾಗಿ ಖಂಡಿಸಿದ್ದು, ಇದು ರಾಜಕೀಯ ಪ್ರೇರಿತ ಎಂದು ಹೇಳಿದೆ. ಪರಮೇಶ್ವರ್ ಪಕ್ಷದೊಳಗಿನ ಪ್ರಮುಖ ದಲಿತ ನಾಯಕರಾಗಿರುವುದರಿಂದ ಅವರನ್ನು ಗುರಿಯಾಗಿಸಲಾಗುತ್ತಿದೆ ಎಂದು ಕಾಂಗ್ರೆಸ್ ನಾಯಕರು ಆರೋಪಿಸಿದ್ದಾರೆ.

ಪರಮೇಶ್ವರ್ ಅವರನ್ನು ಬೆಂಬಲಿಸಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವರು ಭಾಗಿಯಾಗಿರುವ ಸಾಧ್ಯತೆ ಇಲ್ಲ ಎಂದು ನನಗೆ ಖಚಿತವಾಗಿದೆ. ಅವರು ಸಭ್ಯ ಮತ್ತು ಸರಳ ವ್ಯಕ್ತಿ ಎಂದು ತಮ್ಮ ಸಹೋದ್ಯೋಗಿಯನ್ನು ಸಮರ್ಥಿಸಿ ಕೊಂಡಿದ್ದಾರೆ.

**ಪ್ರತಿಕ್ರಿಯೆಗೆ ಸಿಎಂ ನಕಾರ:** ಗೃಹ ಸಚಿವ ಜಿ.ಪರಮೇಶ್ವರ್ ಅವರ ಶಿಕ್ಷಣ ಸಂಸ್ಥೆಗಳ ಮೇಲೆ ಇಡಿ ದಾಳಿ ನಡೆದಿರುವುದಕ್ಕೆ ಪ್ರತಿಕ್ರಿಯಿಸಲು ಸಿಎಂ ಸಿದ್ದರಾಮಯ್ಯ ನಿರಾಕರಿಸಿ ದ್ದಾರೆ.

ವಿಧಾನಸೌಧದ ಬಳಿ ಬುಧವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನನಗೆ ಇಡಿ ದಾಳಿಯ ಬಗ್ಗೆ ಗೊತ್ತಿಲ್ಲ. ಗೊತ್ತಿಲ್ಲದ ವಿಚಾರದ ಬಗ್ಗೆ ಕೇಳಿದರೆ ಏನನ್ನೂ ಹೇಳಲು ಸಾಧ್ಯವಿಲ್ಲ ಎಂದರಲ್ಲದೆ ವಿಷಯ ತಿಳಿದು ನಂತರ ಪ್ರತಿಕ್ರಿಯಿಸುವುದಾಗಿ ಹೇಳಿದರು.

# ಭೂ ಪರಿಹಾರಕ್ಕಾಗಿ ಮುಗಿಬಿದ್ದ ಜನ



● ಶ್ರೀಧರ್ ಆರ್.ಭಟ್

ನಂಜನಗೂಡು: ಮುಖ್ಯಮಂತ್ರಿ ಸಿದ್ದರಾಮಯ್ಯನವರು ಪ್ರತಿನಿಧಿಸುತ್ತಿರುವ ವರುಣ ಕ್ಷೇತ್ರಕ್ಕೆ ಸೇರುವ ಇಮ್ಮಾವು, ಹುಳಿಮಾವು ಗ್ರಾಮಗಳಲ್ಲಿ 2012ರಲ್ಲಿ ಸರ್ಕಾರ ರೈತರಿಂದ ಭೂಮಿ ವಶಪಡಿಸಿಕೊಂಡು ಕೆಐಎಡಿಬಿಗೆ ನೀಡಿದ ಸಂಬಂಧ ಭೂಮಿ ಕಳೆದುಕೊಂಡ ಜನರು ಇದೀಗ ಪರಿಹಾರಕ್ಕಾಗಿ ಮುಗಿಬಿದ್ದಿದ್ದಾರೆ.

ಜಮೀನಿನ ಪರಿಹಾರ ಪಡೆದುಕೊಳ್ಳಲು ಈ ಭಾಗದ ಸಹಸ್ರಾರು ಜನರು ಬುಧವಾರ ನಂಜನಗೂಡು ತಾಲ್ಲೂಕು ಕಚೇರಿಗೆ ಆಗಮಿಸಿದ್ದ ಪರಿಣಾಮ ಅರ್ಜಿ ಸ್ವೀಕರಿಸುತ್ತಿದ್ದ ಕಚೇರಿಯ ಸಿಬ್ಬಂದಿ ಹೈರಾಣಾದರು.

2012ರಲ್ಲಿ ಹಿಮ್ಮಾವು ಹಾಗೂ ಹುಳಿಮಾವು ಕೈಗಾರಿಕಾ ಕೇಂದ್ರವನ್ನು ನಿರ್ಮಿಸಲು ರಾಜ್ಯ ಸರ್ಕಾರ ಈ ಪ್ರದೇಶದ ಭೂಮಿಯನ್ನು ವಶಪಡಿಸಿಕೊಂಡು ಆಗಲೇ ಕೆಐಎಡಿಬಿಗೆ ಹಸ್ತಾಂತರಿಸಿತ್ತು. ಅಂದಿನಿಂದ ಇಂದಿನವರೆಗೆ ಸುಮಾರು 13 ವರ್ಷಗಳಿಂದ ಪರಿಹಾರಕ್ಕಾಗಿ ಅಲೆದಾಡಿ ಹೋರಾಟ ಮಾಡಿ ಹೈರಾಣಾದ ಜನ ಈಗ ಪರಿಹಾರಕ್ಕಾಗಿ ಅರ್ಜಿ ಕರೆಯಲಾಗಿರುವ ಮಾಹಿತಿ ತಿಳಿದು ಮಂಗಳವಾರ ನಂಜನಗೂಡು ತಾಲ್ಲೂಕು ಕಚೇರಿಗೆ ದೌಡಾಯಿಸಿದ್ದರು.

300 ಎಕರೆಯಲ್ಲಿ ತಮ್ಮ ತಂದೆ, ತಾತ, ಮುತ್ತಾತ ಉಳುಮೆ ಮಾಡುತ್ತಿದ್ದರು. ಆದ್ದರಿಂದ ಈಗ ಆ ಭೂಮಿಯ ಪರಿಹಾರ ಅವರ ವಂಶಸ್ಥರಾದ ನಮಗೆ ಬರಬೇಕು ಎಂಬ ಅರ್ಜಿಗಳು ಸಲ್ಲಿಕೆಯಾಗಿದ್ದು, ಅರ್ಜಿಗಳ ವಿಲೇವಾರಿ ಕಂದಾಯ ಇಲಾಖೆಯ ಸಿಬ್ಬಂದಿಗೆ ತಲೆನೋವಾಗಿ ಪರಿಣಮಿಸಿದೆ.


ಪರಿಹಾರಕ್ಕಾಗಿ ನೀಡಬೇಕಾದ ಅರ್ಜಿಯೊಂದಿಗೆ ಸಾಗುವಳಿ ಚೀಟಿ, ಆರ್‌ಟಿಸಿ, ಆಧಾರ್, ವಂಶವೃಕ್ಷ, ಬ್ಯಾಂಕ್ ಪಾಸ್‌ಬುಕ್ ಸೇರಿದಂತೆ ವಿವಿಧ ದಾಖಲಾತಿಗಳನ್ನು ಲಗತ್ತಿಸಬೇಕು ಎಂಬ ಷರತ್ತುಗಳನ್ನು ವಿಧಿಸಿದ್ದು, ಒಂದೇ ಜಾಗಕ್ಕಾಗಿ ಅನೇಕರು ಆ ಜಾಗ ತಮ್ಮದು ಎಂದು ಅರ್ಜಿ ನೀಡಿದ್ದೂ ಸೇರಿದಂತೆ ನೀಡಿದ ಅರ್ಜಿಗಳಲ್ಲಿ ಆ ದಾಖಲಾತಿಗಳ ಸಿಂಧುತ್ವವನ್ನು ಪತ್ತೆ ಮಾಡುವುದೇ ಕಂದಾಯ ಅಧಿಕಾರಿಗಳ ಪಾಲಿಗೆ ಶ್ರಮದಾಯಕವಾಗಲಿದೆ.

ಅರ್ಜಿ ಸಲ್ಲಿಸಲು ಬಂದಿದ್ದ ಅನೇಕರಿಗೆ ಕೈಗಾರಿಕೆಗಾಗಿ ಜಮೀನು ವಶಪಡಿಸಿಕೊಂಡಿರುವುದೇ ತಿಳಿದಿಲ್ಲ. ಅರ್ಜಿ ನೀಡಲು ಸರತಿಯಲ್ಲಿ ನಿಂತವರನ್ನು ಪತ್ರಿಕೆ ಮಾತನಾಡಿಸಿದಾಗ ಅವರು ಚಿತ್ರನಗರಿಗೆ ನಮ್ಮ ಜಮೀನು ನೀಡಿದ್ದು ಅದಕ್ಕಾಗಿ ಪರಿಹಾರ ಎಂದರು.

ಅಧಿಕಾರಿಗಳ ಪ್ರಕಾರ ಈ ಪರಿಹಾರ 2012ರಲ್ಲಿ ಕೈಗಾರಿಕೆಗಾಗಿ ವಶಪಡಿಸಿಕೊಂಡಿದ್ದ 300 ಎಕರೆ ಪ್ರದೇಶದ ಸರ್ವೆ ನಂ.424 ರ ಸುತ್ತಮುತ್ತಲಿನ ಪರಿಹಾರ ನೀಡಿಕೆಯಲ್ಲಿ ಆಗ ಕೈತಪ್ಪಿಹೋಗಿದ್ದ ಪ್ರದೇಶಕ್ಕೆ ಮಾತ್ರ ಸೀಮಿತವಾಗಿದೆ.

# 'ಮಹಿಳೆಯರಿಗೆ ಅಹಲ್ಯಾಬಾಯಿ ಹೋಳ್ಕರ್ ಆದರ್ಶ'

## ಅಹಲ್ಯಾಬಾಯಿ ಹೋಳ್ಕರ್ ಅವರ 300ನೇ ಜನ್ಮ ದಿನಾಚರಣೆಯಲ್ಲಿ ಮಂಜುಳಾ ಬಣ್ಣನೆ



ಮೈಸೂರು: ಅಹಲ್ಯಾಬಾಯಿ ಹೋಳ್ಕರ್ ಅವರ ಸ್ಮರಣೆ ಪ್ರಸ್ತುತ ದಿನಗಳಲ್ಲಿ ಅವಶ್ಯ. ಅವರ ಆಡಳಿತ ನಮಗೆ ಆದರ್ಶ ಹಾಗೂ ಅವರ ಮಾದರಿಯಲ್ಲಿ ಅಧಿಕಾರ ನಡೆಸಬೇಕು ಎಂದು ಬಿಜೆಪಿ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷರಾದ ಮಂಜುಳಾ ತಿಳಿಸಿದರು.

ಅಹಲ್ಯಾಬಾಯಿ ಹೋಳ್ಕರ್ ಅವರ 300ನೇ ಜನ್ಮ ದಿನಾಚರಣೆ ಅಂಗವಾಗಿ ನಗರದ ಬಿಜೆಪಿ ಕಚೇರಿಯಲ್ಲಿ ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಏರ್ಪಡಿಸಿದ್ದ ಕಾರ್ಯಾಗಾರದಲ್ಲಿ ಮಾತನಾಡಿದ ಅವರು, ಇಂದಿನ ಮಹಿಳೆಯರು ಸಣ್ಣ ವಿಚಾರಕ್ಕೂ ಅಸಹನೆ, ಕೋಪ ಮಾಡಿ ಕೊಳ್ಳುತ್ತಾರೆ. ವಿಚ್ಛೇದನದ ಹಾದಿ ಹಿಡಿಯುತ್ತಿದ್ದಾರೆ. ಅವಕಾಶಗಳು, ಸವಲತ್ತುಗಳು ನಮಗೆ ಹೆಚ್ಚಿವೆ. ಹಾಗಾಗಿ ಏನು ಸಾಧಿಸಬೇಕು ಎಂಬುದರ ಬಗೆಗೆ ಹೆಚ್ಚು ಒಲವಿಲ್ಲ. ಆದರೆ, ಹೋಳ್ಕರ್ ಅವರು ಅವತ್ತಿಗೆ ಸಾವಿರಾರು ಅಡಚಣೆಗಳಿದ್ದರೂ ಅವೆಲ್ಲವನ್ನು ಮೆಟ್ಟಿ ನಿಂತು ಸಾಧನೆ ಮಾಡುವ ಮೂಲಕ ಪ್ರಪಂಚಕ್ಕೇ ಮಾದರಿಯಾಗಿ ದ್ದಾರೆ ಎಂದರು.

ಅಹಲ್ಯಾಬಾಯಿ ಹೋಳ್ಕರ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಆದರ್ಶವಾಗಿ ತೆಗೆದುಕೊಂಡು, ಅವರ ಪ್ರತಿಮೆಯನ್ನು ಸಂಸತ್ತಿನ ಗ್ರಂಥಾಲಯದಲ್ಲಿ ಸ್ಥಾಪಿಸಿದ್ದಾರೆ. ಕಾಶಿ ಕಾರಿಡಾರ್ ಅಲ್ಲೂ ಪ್ರತಿಷ್ಠಾಪನೆ ಮಾಡಲಾಗಿದೆ. ಕಾಶಿ ವಿಶ್ವನಾಥ ದೇವಾಲಯವನ್ನು ಮೊದಲು ಜೀರ್ಣೋದ್ಧಾರ ಮಾಡಿದವರು ಅಹಲ್ಯಾಬಾಯಿ. ದೇವಸ್ಥಾನದ ಉದ್ಧಾರಕ್ಕೆ ಪ್ರಜೆಗಳ ಬೊಕ್ಕಸವನ್ನು ವ್ಯಯ ಮಾಡದೆ, ತಮ್ಮ ಆಸ್ತಿಯ ಆದಾಯವನ್ನು ಖರ್ಚು ಮಾಡುತ್ತಿದ್ದರು ಎಂದು ತಿಳಿಸಿದರು.

**ರಾಜ್ಯದ ಕಾಂಗ್ರೆಸ್ ಸರ್ಕಾರ 2 ವರ್ಷಗಳನ್ನು ಪೂರೈಸಿದ ಸಂಭ್ರಮದಲ್ಲಿದ್ದು, ಇಡೀ ರಾಜ್ಯದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ, ಬಾಣಂತಿಯರ ಸಾವು ಅಪಾರವಾಗಿದೆ. ಅವರ ಸಮಾಧಿಯ ಮೇಲೆ ಸರ್ಕಾರ ಸಂಭ್ರಮಾಚರಣೆ ಮಾಡುತ್ತಿದೆ. ಉಚಿತ ಗ್ಯಾರಂಟಿಗಳನ್ನು ನೀಡಿ ಜನರಿಗೆ ಮೋಸ ಮಾಡುತ್ತಿದೆ. ಉಚಿತ ಬಸ್ ಸೇವೆಯಿಂದ ವಿದ್ಯಾರ್ಥಿಗಳಿಗೆ, ವ್ಯಾಪಾರಸ್ಥ ಮಹಿಳೆಯರಿಗೆ ತುಂಬಾ ತೊಂದರೆ ಉಂಟಾಗುತ್ತಿದ್ದು, ಬಸ್‌ಗಳ ಓಡಾಟವೇ ಕಡಿಮೆಯಾಗಿದೆ. ಹೀಗಾಗಿ ಶಕ್ತಿ ಯೋಜನೆಯನ್ನು ಮಹಿಳೆಯರೇ ವಿರೋಧಿಸುತ್ತಿದ್ದಾರೆ. ಬಿಜೆಪಿ ಸರ್ಕಾರ ಜಾರಿಗೆ ತಂದಿದ್ದ ಉಚಿತ ಸೈಕಲ್, ಭಾಗ್ಯಲಕ್ಷ್ಮೀ ಯೋಜನೆಗಳನ್ನು ನೀಡಲು ಹಣವಿಲ್ಲದೆ ಯೋಜನೆಗಳನ್ನು ಸ್ಥಗಿತಗೊಳಿಸಿದೆ.**

**-ಮಂಜುಳಾ, ರಾಜ್ಯಾಧ್ಯಕ್ಷರು, ಬಿಜೆಪಿ ಮಹಿಳಾ ಮೋರ್ಚಾ**

ಬಿಜೆಪಿ ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ರೇಣುಕಾ ರಾಜು, ಜಿಲ್ಲಾ ಮಹಿಳಾ ಪ್ರಧಾನ ಕಾರ್ಯದರ್ಶಿ ಬಿ.ಯು.ಚಂದ್ರಕಲಾ, ನಗರಪಾಲಿಕೆ ಮಾಜಿ ಸದಸ್ಯರಾದ ಕಮಲಮ್ಮ, ರತ್ನ ಲಕ್ಷ್ಮಣ್, ಮಹಿಳಾ ಮೋರ್ಚಾ ರಾಜ್ಯ ಕಾರ್ಯಕಾರಿಣಿ ಸದಸ್ಯರಾದ ಶಾಂತಮ್ಮ, ಪುಷ್ಪ ವೆಂಕಟೇಶ್ ಹಾಜರಿದ್ದರು.


# ಮನೆಗೆ ನುಗ್ಗಿ 195 ಗ್ರಾಂ ಚಿನ್ನಾಭರಣ ಕಳ್ಳತನ

ಮೈಸೂರು: ಮನೆಯ ಬಾಲ್ಕನಿಯಿಂದ ಕೊಠಡಿ ಒಳಗೆ ನುಗ್ಗಿರುವ ಕಳ್ಳರು ಮನೆಯ ಅಲ್ಮೆರಾದಲ್ಲಿದ್ದ ಅಂದಾಜು 15.60 ಲಕ್ಷ ರೂ. ಮೌಲ್ಯದ 195 ಗ್ರಾಂ ಚಿನ್ನಾಭರಣವನ್ನು ದೋಚಿದ್ದಾರೆ.



ವಿಜಯನಗರ ಮೊದಲನೇ ಹಂತದ ನಿವಾಸಿ ಡಾ. ಮಂಜುನಾಥ್ ಎಂಬವರ ಮನೆಯಲ್ಲಿ ಕಳ್ಳತನ ನಡೆದಿದೆ. ಮಂಜುನಾಥ್ ಹಾಗೂ ಅವರ ಪತ್ನಿ ಮನೆಯಿಂದ ಹೊರಹೋಗಿದ್ದ ಸಂದರ್ಭದಲ್ಲಿ ಕಳ್ಳತನ ನಡೆದಿದೆ. ತೋಟಗಾರಿಕೆ ಮಹಾವಿದ್ಯಾಲಯದಲ್ಲಿ ಸಹ ಪ್ರಾಧ್ಯಾಪಕರಾಗಿ ಕೆಲಸ ನಿರ್ವಹಿಸುತ್ತಿರುವ ಡಾ.ಮಂಜುನಾಥ್ ಹಾಗೂ ಪತ್ನಿ ಡಾ.ಸುಮಾ ಅವರು ಮಂಡ್ಯದ ವಿಸಿ ಫಾರಂನಲ್ಲಿ ಪ್ರಾಧ್ಯಾಪಕರಾಗಿ ಕೆಲಸ ನಿರ್ವಹಿಸುತ್ತಿದ್ದಾರೆ. ಇಬ್ಬರೂ ಮೇ 20ರಂದು ಕೆಲಸಕ್ಕೆ ತೆರಳಿದ್ದರು. ಈ ವೇಳೆ ಖದೀಮರು, ಮನೆಯ ಬಾಲ್ಕನಿಯಿಂದ ಒಳ ನುಗ್ಗಿ, ಕೊಠಡಿಯ ಅಲ್ಮೆರಾದಲ್ಲಿದ್ದ ಚಿನ್ನಾಭರಣ ಹಾಗೂ 5 ಸಾವಿರ ರೂ. ನಗದು ದೋಚಿದ್ದಾರೆ. ಈ ಸಂಬಂಧ ವಿಜಯನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.

ನಮ್ಮ email ವಿಳಾಸ :
andolana@gmail.com
advtandolana@gmail.com
classifiedads59@gmail.com
ಆಂದೋಲನ



ಮೈಸೂರು ರೇಸ್ ಕ್ಲಬ್ ಮೈಸೂರು ನಗರಪಾಲಿಕೆಗೆ ಅತಿ ಹೆಚ್ಚು ತೆರಿಗೆಯನ್ನು ಪಾವತಿಸುವ ಏಕೈಕ ಸಂಸ್ಥೆಯಾಗಿದೆ. 2025-2026ನೇ ಸಾಲಿಗೆ ಸಂಬಂಧಿಸಿದ ಆಸ್ತಿ ತೆರಿಗೆ ಬಾಬ್ತು 3,25,81,766 ರೂ. ಚೆಕ್ ಅನ್ನು ಮೈಸೂರು ರೇಸ್ ಕ್ಲಬ್ ಛೇರ್ಮನ್ ಜಿ.ವೆಂಕಟೇಶ್ ಅವರು ಮೈಸೂರು ಮಹಾನಗರ ಪಾಲಿಕೆ ಆಯುಕ್ತ ಶೇಕ್ ತನ್ವೀರ್ ಆಸಿಫ್ ಅವರಿಗೆ ವಿತರಣೆ ಮಾಡಿದರು. ಈ ಸಂದರ್ಭದಲ್ಲಿ ಮೈಸೂರು ರೇಸ್‌ಕ್ಲಬ್ ಸಮಿತಿ ಸದಸ್ಯರಾದ ಡಾ.ಎ.ಎಸ್. ಅಜಿತ್ ಕುಮಾರ್‌ರಾಜ್ ಅರಸ್, ಡಾ.ಎಂ.ವಿ.ವೇಣು, ಜಯರಾಜ್ ಅರಸ್, ಮೈಸೂರು ರೇಸ್ ಕ್ಲಬ್ ಕಾರ್ಯದರ್ಶಿಯೂ ಆದ ಸಿಇಒ ಎನ್.ಎಚ್.ಎಸ್.ಮಣಿ ಮತ್ತು ಮೈಸೂರು ಮಹಾನಗರಪಾಲಿಕೆಯ ಅಧಿಕಾರಿಗಳು ಹಾಜರಿದ್ದರು.

# ಅಕ್ರಮ ರೆಸಾರ್ಟ್‌ಗಳಿಗೆ ಕಡಿವಾಣ ಹಾಕಲು ಮನವಿ

ಮೈಸೂರು: ಕಬಿನಿ ಹಿನ್ನೀರು ಪ್ರದೇಶದಲ್ಲಿ ಅಕ್ರಮವಾಗಿ ತಲೆ ಎತ್ತುತ್ತಿರುವ ರೆಸಾರ್ಟ್‌ಗಳಿಗೆ ಕಡಿವಾಣ ಹಾಕುವಂತೆ ವಕೀಲ ವಿ.ರವಿಕುಮಾರ್ ಮನವಿ ಮಾಡಿದ್ದಾರೆ.

ಈ ಸಂಬಂಧ ಡಿಸಿಎಂ ಡಿ.ಕೆ.ಶಿವಕುಮಾರ್ ಅವರಿಗೆ ದೂರು ನೀಡಿದ್ದಾರೆ. 15ಕ್ಕೂ ಹೆಚ್ಚು ರೆಸಾರ್ಟ್ ಗಳನ್ನು ಪತ್ತೆ ಹಚ್ಚಿ ಪತ್ರ ಬರೆದಿದ್ದಾರೆ. ಲೋಕಾಯುಕ್ತ ಅಧಿಕಾರಿಗಳು, ಪ್ರಾದೇಶಿಕ ಆಯುಕ್ತರು, ಅಪರ ಮುಖ್ಯ ಕಾರ್ಯದರ್ಶಿ, ಕಂದಾಯ ಇಲಾಖೆ ಕಾರ್ಯದರ್ಶಿ, ಸರ್ಕಾರದ ಕಾರ್ಯದರ್ಶಿ, ಪೊಲೀಸ್ ಮಹಾ ನಿರ್ದೇಶಕರು, ಅರಣ್ಯ ಮತ್ತು ಪರಿಸರ ಇಲಾಖೆ ಕಾರ್ಯದರ್ಶಿ, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರು, ಕಾರ್ಮಿಕ ಇಲಾಖೆ ಸೇರಿ ಹಲವರಿಗೆ ರವಿಕುಮಾರ್ ಪತ್ರ ಬರೆದು ಕ್ರಮ ಕೈಗೊಳ್ಳಲು ಮನವಿ ಮಾಡಿದ್ದಾರೆ.

**ಕರ್ತವ್ಯ ಲೋಪ, ಭೂ ಮಂಜೂರಾತಿಯಲ್ಲಿ ಅಕ್ರಮ ಆರೋಪ**

# ನಾಗಮಂಗಲ: ಕಂದಾಯ ಇಲಾಖೆಯ ನಾಲ್ವರು ಅಧಿಕಾರಿಗಳು ಅಮಾನತ್ತು

ನಾಗಮಂಗಲ: ಕರ್ತವ್ಯ ಲೋಪ ಹಾಗೂ ಭೂಮಿ ಮಂಜೂರಾತಿಯಲ್ಲಿ ಅಕ್ರಮ ಚಟುವಟಿಕೆ ಆರೋಪದ ಮೇಲೆ ತಾಲ್ಲೂಕು ಕಂದಾಯ ಇಲಾಖೆಯ ನಾಲ್ವರು ನೌಕರರನ್ನು ಮೈಸೂರು ಪ್ರಾದೇಶಿಕ ಆಯುಕ್ತರು ಮತ್ತು ಮಂಡ್ಯ ಜಿಲ್ಲಾಧಿಕಾರಿ ಅಮಾನತ್ತು ಮಾಡಿ ಆದೇಶ ಹೊರಡಿಸಿದ್ದಾರೆ.

ತಹಸಿಲ್ದಾರ್ ಕಚೇರಿಯ ಉಪ ತಹಸಿಲ್ದಾರ್ ಪ್ರಸನ್ನ, ದೇವಲಾಪುರ ಹೋಬಳಿಯ ರಾಜಸ್ವ ನಿರೀಕ್ಷಕ ಎಂ.ಗಣೇಶ್, ಬಿಂಡಿಗನವಿಲೆ ಹೋಬಳಿ ರಾಜಸ್ವ ನಿರೀಕ್ಷಕ ಶಶಿಧರ್ ಹಾಗೂ ತಟ್ಟಹಳ್ಳಿ ವೃತ್ತದ ಎಚ್. ಕರ್ಣ ಅಮಾನತ್ತುಗೊಂಡವರು.



ಶಶಿಧರ್



ಎಂ.ಗಣೇಶ್



ಪ್ರಸನ್ನ



ಎಚ್.ಕರ್ಣ

ತಾಲ್ಲೂಕಿನಲ್ಲಿ ಬಗರ್ ಹುಕುಂ ಸಾಗುವಳಿ ಮಂಜೂರು ಮಾಡುವಲ್ಲಿ ಈ ನೌಕರರು ಅರ್ಜಿದಾರರಲ್ಲದ ವ್ಯಕ್ತಿಗಳಿಗೆ ನಮೂನೆ 53ರಲ್ಲಿ ದೇವರಮಲ್ಲನಾಯಕನಹಳ್ಳಿ ಸ.ನಂ.61ರ ಬದಲಾಗಿ ಮೈಲಾರಪಟ್ಟಣ 173ರಲ್ಲಿ ಅರ್ಜಿದಾರನಲ್ಲದ ಅನ್ಯ ವ್ಯಕ್ತಿಗೆ ಭೂ ಮಂಜೂರು ಮಾಡಲು ನಕಲು ಕಡತ ಸೃಷ್ಟಿಸಿ, ಬಗರ್ ಹುಕುಂ ಸಭೆ ಮೂಲಕ ಭೂ ಮಂಜೂರಾತಿಗೆ ಪ್ರಯತ್ನಿಸಿ, ಸಿಕ್ಕಿಬಿದ್ದಿದ್ದು, ಬಗರ್ ಹುಕುಂ ಮಾಜಿ ಸದಸ್ಯ ಬಿಜೆಪಿಯ ನರಸಿಂಹಮೂರ್ತಿ ನೀಡಿದ ದೂರಿನ ಮೇರೆಗೆ ಈ ನಾಲ್ವರು ನೌಕರರು ಅಮಾನತ್ತುಗೊಂಡಿದ್ದಾರೆ.

ಉಪ ತಹಸಿಲ್ದಾರ್ ಪ್ರಸನ್ನ ಅವರನ್ನು ಮೈಸೂರು ಪ್ರಾದೇಶಿಕ ಆಯುಕ್ತರು ಅಮಾನತ್ತು ಮಾಡಿ ಆದೇಶ ಹೊರಡಿಸಿದ್ದರೆ, ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರು ದೇವಲಾಪುರ ಹೋಬಳಿಯ ರಾಜಸ್ವ ನಿರೀಕ್ಷಕ ಎಂ.ಗಣೇಶ್, ಬಿಂಡಿಗನವಿಲೆ ಹೋಬಳಿ ರಾಜಸ್ವ ನಿರೀಕ್ಷಕ ಶಶಿಧರ್ ಹಾಗೂ ತಟ್ಟಹಳ್ಳಿ ವೃತ್ತದ ಎಚ್. ಕರ್ಣ ಅವರನ್ನು ಅಮಾನತ್ತುಗೊಳಿಸಿ ಆದೇಶ ಹೊರಡಿಸಿದ್ದಾರೆ.

**ನಾಗಮಂಗಲ ತಾಲ್ಲೂಕು ಕಂದಾಯ ಇಲಾಖೆಯಲ್ಲಿ ಬಗರ್ ಹುಕುಂ ಸಾಗುವಳಿ ಮಂಜೂರಾತಿ ವಿಚಾರದಲ್ಲಿ ಹಲವು ಲೋಪಗಳು ನಡೆದಿದ್ದು, ಬಲಾಢ್ಯರು ಭೂ ಮಂಜೂರಾತಿ ಮಾಡಿಸಿಕೊಂಡು, ರೈತರಿಗೆ ಅನ್ಯಾಯ ಮಾಡಿದ್ದಾರೆ. ಅಲ್ಲದೇ ಈ ನಾಲ್ವರು ನೌಕರರು ನಕಲಿ ದಾಖಲೆ ಸೃಷ್ಟಿಸಿ, ಅನ್ಯ ವ್ಯಕ್ತಿಗೆ ಭೂ ಮಂಜೂರು ಮಾಡಲು ಮುಂದಾಗಿದ್ದಾರು. ಈ ಪ್ರಕರಣವನ್ನು ನಾನು ಮೈಸೂರು ಪ್ರಾದೇಶಿಕ ಆಯುಕ್ತರ ಗಮನಕ್ಕೆ ತರಲಾಗಿ, ನೌಕರರ ಕರ್ತವ್ಯ ಲೋಪ ಸಾಬೀತಾಗಿ, ಅವರನ್ನು ಆಯುಕ್ತರು ಮತ್ತು ಮಂಡ್ಯ ಜಿಲ್ಲಾಧಿಕಾರಿ ಅವರು ಅಮಾನತ್ತು ಮಾಡಿ ಆದೇಶ ಹೊರಡಿಸಿದ್ದಾರೆ. ನನ್ನ ಹೋರಾಟಕ್ಕೆ ಜಯ ಸಿಕ್ಕಿದೆ.**

**-ನರಸಿಂಹಮೂರ್ತಿ, ಬಿಜೆಪಿ ಮುಖಂಡ, ನಾಗಮಂಗಲ**

ತಾಲ್ಲೂಕಿನಲ್ಲಿ ಬಗರ್ ಹುಕುಂ ಸಾಗುವಳಿ ಮಂಜೂರಾತಿಯಲ್ಲಿ ಸಾಕಷ್ಟು ಲೋಪಗಳಾಗಿದ್ದು, ಅರ್ಜಿದಾರರಲ್ಲದವರಿಗೆ ಹಲವು ಕಡೆ ಭೂಮಿ ಮಂಜೂರಾತಿಯಾಗಿರುವ ನಿದರ್ಶನಗಳಿದ್ದು, ಈ ಬಗ್ಗೆ ತನಿಖೆ ನಡೆಸಬೇಕು ಎಂಬುದು ಇಲ್ಲಿನ ರೈತರ ಆಗ್ರಹವಾಗಿದೆ.

ಅಲ್ಲದೇ ಕಂದಾಯ ಇಲಾಖೆಯಲ್ಲಿ ಭ್ರಷ್ಟಾಚಾರ ನಡೆಯುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕು ಎಂದು ಒತ್ತಾಯಿಸಿದ್ದಾರೆ.


# ಆಟೋಮೋಟಿವ್ ಆಕ್ಸೆಲ್ಸ್ ನಿಯಮಿತ

(IATF 16949 Company)

Corporate Identity No: L51909KA1981PLC004198

ನೋಂದಾಯಿತ ಕಛೇರಿ: ಹೂಟಗಲ್ಲಿ ಕೈಗಾರಿಕಾ ಪ್ರದೇಶ, ಹುಣಸೂರು ರಸ್ತೆ ಪಕ್ಕ, ಮೈಸೂರು – 570 018, ಕರ್ನಾಟಕ

## ಮಾರ್ಚ್ 31, 2025 ರ ತ್ರೈಮಾಸಿಕ ಮತ್ತು ವಾರ್ಷಿಕ ಅವಧಿಗೆ ಕೊನೆಗೊಂಡ ಪರಿಶೋಧಿತ ಹಣಕಾಸಿನ ಫಲಿತಾಂಶಗಳ ಪ್ರಕಟಣೆ

(ಪ್ರತಿ ಷೇರಿನ ಡೇಟಾವನ್ನು ಹೊರತುಪಡಿಸಿ, ರೂಪಾಯಿಗಳು ಮಿಲಿಯನ್‌ಗಳಲ್ಲಿ)

| ಕ್ರ. ಸಂ. | ವಿವರಗಳು | ಮೂರು ತಿಂಗಳ ಅವಧಿಗೆ ಕೊನೆಗೊಂಡ | | | ವಾರ್ಷಿಕ ಅವಧಿಗೆ ಕೊನೆಗೊಂಡ | ವಾರ್ಷಿಕ ಅವಧಿಗೆ ಕೊನೆಗೊಂಡ |
|---|---|---|---|---|---|---|
| | | 31.03.2025 (ಪರಿಶೋಧಿತ) | 31.12.2024 (ಅಪರಿಶೋಧಿತ) | 31.12.2023 (ಪರಿಶೋಧಿತ) | 31.03.2025 (ಪರಿಶೋಧಿತ) | 31.03.2024 (ಪರಿಶೋಧಿತ) |
| 1 | ನಿರ್ವಹಣೆಯಿಂದ ಬಂದ ಒಟ್ಟು ವರಮಾನ | 5,683.44 | 5,367.66 | 5,768.83 | 21,047.52 | 22,448.83 |
| 2 | ನಿವ್ವಳ ಲಾಭ/ (ನಷ್ಟ) ಪ್ರಸಕ್ತ ಅವಧಿಗೆ (ತೆರಿಗೆ, ಅಸಾಧಾರಣ ಮತ್ತು / ಅಥವಾ ಅಸಾಮಾನ್ಯ ವಸ್ತುಗಳ ಮುನ್ನ) | 618.39 | 540.00 | 591.27 | 2,106.13 | 2,229.65 |
| 3 | ನಿವ್ವಳ ಲಾಭ/ (ನಷ್ಟ) ಪ್ರಸಕ್ತ ಅವಧಿಗೆ, ತೆರಿಗೆಯ ಮುನ್ನ (ಅಸಾಧಾರಣ ಮತ್ತು / ಅಥವಾ ಅಸಾಮಾನ್ಯ ವಸ್ತುಗಳ ನಂತರ) | 618.39 | 540.00 | 591.27 | 2,106.13 | 2,229.65 |
| 4 | ನಿವ್ವಳ ಲಾಭ / (ನಷ್ಟ) ಪ್ರಸಕ್ತ ಅವಧಿಗೆ, ತೆರಿಗೆಯ ನಂತರ (ಅಸಾಧಾರಣ ಮತ್ತು / ಅಥವಾ ಅಸಾಮಾನ್ಯ ವಸ್ತುಗಳ ನಂತರ) | 459.27 | 395.81 | 440.97 | 1,555.35 | 1,661.55 |
| 5 | ಸಮಗ್ರ ಅವಧಿಯ ಸಂಪೂರ್ಣ ಆದಾಯ [ಒಳಗೊಂಡಿರುವ ಲಾಭ/(ನಷ್ಟ) ಅವಧಿಗೆ (ತೆರಿಗೆಯ ನಂತರ) ಹಾಗೂ ಇತರೆ ಸಮಗ್ರ ಆದಾಯ (ತೆರಿಗೆಯ ನಂತರ)] | 459.16 | 392.17 | 436.07 | 1,543.44 | 1,649.73 |
| 6 | ಈಕ್ವಿಟಿ ಷೇರುಬಂಡವಾಳ | 151.12 | 151.12 | 151.12 | 151.12 | 151.12 |
| 7 | ಹಿಂದಿನ ವರ್ಷದ ಆಡಿಟೆಡ್ ಬ್ಯಾಲೆನ್ಸ್ ಶೀಟ್‌ನಲ್ಲಿ ತೋರಿಸಿರುವಂತೆ ಇತರೆ ಈಕ್ವಿಟಿ | | | | 9,668.10 | 8,608.26 |
| 8 | ಪ್ರತಿ ಷೇರಿನಗಳಿಕೆ (ಪ್ರತಿ ರೂ.10ಕ್ಕೆ) (ಮುಂದುವರಿಯುತ್ತಿರುವ ಹಾಗೂ ಸ್ಥಗಿತಗೊಂಡ ಕಾರ್ಯಾಚರಣೆಗಳಿಗೆ) ಮೂಲಭೂತ ಮತ್ತು ಡೈಲ್ಯೂಟೆಡ್ | 30.39 | 26.20 | 29.18 | 102.92 | 109.95 |

ಸೂಚನೆಗಳು:

(1) ಮೇಲಿನ ಪರಿಶೋಧಿತ ಹಣಕಾಸು ಫಲಿತಾಂಶಗಳನ್ನು ಲೆಕ್ಕಪರಿಶೋಧನಾ ಸಮಿತಿಯು 2025ರ ಮೇ 19 ರಂದು ನಡೆದ ಸಭೆಯಲ್ಲಿ ಪರಿಶೀಲಿಸಿದೆ ಮತ್ತು 2025 ರ ಮೇ 20 ರಂದು ನಡೆದ ಸಭೆಯಲ್ಲಿ ನಿರ್ದೇಶಕರ ಮಂಡಳಿಯು ಅನುಮೋದಿಸಿದೆ.

(2) ನಿರ್ದೇಶಕರ ಮಂಡಳಿಯು 2025 ರ ಮೇ 20 ರಂದು ನಡೆದ ಸಭೆಯಲ್ಲಿ ಅಂತಿಮ ಲಾಭಾಂಶವನ್ನು ರೂ. 30.50/- ಪ್ರತಿ ಈಕ್ವಿಟಿ ಷೇರು ರೂ. 10 ಪ್ರತಿ (305%) ಎಂದು ಶಿಫಾರಸು ಮಾಡಲಾಗಿದೆ.

(3) ಈ ಮೇಲಿನವು 31-03-2025 ರ ವಾರ್ಷಿಕ ಅವಧಿಗೆ ಕೊನೆಗೊಂಡ ಪರಿಶೋಧಿತ ಹಣಕಾಸು ಫಲಿತಾಂಶಗಳ ಸಂಕ್ಷಿಪ್ತ ರೂಪವಾಗಿದ್ದು ಸೆಬಿ (ಪಟ್ಟಿ ಕಟ್ಟುಪಾಡುಗಳು ಮತ್ತು ಬಹಿರಂಗಪಡಿಸುವಿಕೆಯ ಅವಶ್ಯಕತೆಗಳು) ನಿಯಮಗಳು, 2015 ರ ನಿಯಂತ್ರಣ 33 ರ ಅಡಿಯಲ್ಲಿ ಸ್ಟಾಕ್ ಎಕ್ಸ್ಚೇಂಜಗಳೊಂದಿಗೆ ಸಲ್ಲಿಸಲಾಗಿದೆ. ಈ ಆರ್ಥಿಕ ಹಣಕಾಸು ಫಲಿತಾಂಶಗಳ ಪೂರ್ಣ ಸ್ವರೂಪವು ಸ್ಟಾಕ್ ಎಕ್ಸ್‌ಚೇಂಜ್‌ನ ವೆಬ್‌ಸೈಟ್‌ಗಳಾದ www.nseindia.com, www.bseindia.com ರಲ್ಲಿ ಮತ್ತು ಕಂಪನಿಯ ವೆಬ್‌ಸೈಟ್ www.autoaxle.com ಗಳಲ್ಲಿ ಲಭ್ಯವಿದೆ.

ಸ್ಥಳ : ಪುಣೆ
ದಿನಾಂಕ : ಮೇ 20, 2025

ನಿರ್ದೇಶಕರ ಮಂಡಳಿಯ ಪರವಾಗಿ
ಆಟೋಮೋಟಿವ್ ಆಕ್ಸೆಲ್ಸ್ ನಿಯಮಿತ
ನಾಗರಾಜ ಗರ್ಗೇಶ್ವರಿ
ಪೂರ್ಣಾವಧಿಯ ನಿರ್ದೇಶಕರು
ಡಿ.ಐ.ಎನ್ : 00839616

KALYANI MERITOR